**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : ksrtc.karnataka.gov.in

**Karnataka State Road Transport Corporation**
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : ksrtc.karnataka.gov.in

ಸಂ.ಕರಾಸ:ಕೇಕ:ಆಡಳಿತ:ಸೇನಿ:/572(ಉಕ)/285:2025-26 ದಿನಾಂಕ: 18-06-2025

# ಸುತ್ತೋಲೆ ಸಂಖ್ಯೆ : 1736

ವಿಷಯ: ರಾಜ್ಯ ರಸ್ತೆ ಸಾರಿಗೆ ನಿಗಮಗಳ ದರ್ಜೆ-3 ಮೇಲ್ವಿಚಾರಕೇತರ ಹಾಗೂ ದರ್ಜೆ-4 ನೌಕರರ ಅಂತರ ನಿಗಮ ವರ್ಗಾವಣೆ ಮಾರ್ಗಸೂಚಿಗಳು.

ಉಲ್ಲೇಖ: 1 ಟಿಡಿ 45 ಟಿಸಿಎಸ್ 2020, ದಿನಾಂಕ: 09-03-2021
2 ಟಿಡಿ 45 ಟಿಸಿಎಸ್ 2020, ದಿನಾಂಕ: 23-03-2021
3 ಸುತ್ತೋಲೆ ಸಂ.1690, ದಿನಾಂಕ: 26.03.2021
4 ಟಿಡಿ 45 ಟಿಸಿಎಸ್ 2020, ದಿನಾಂಕ: 18-01-2025

- - - -

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಉಲ್ಲೇಖ-1 ಮತ್ತು 2 ರ ಸರ್ಕಾರದ ಆದೇಶಗಳಲ್ಲಿ ರಸ್ತೆ ಸಾರಿಗೆ ನಿಗಮಗಳ ಕಾಯ್ದೆ 1950 ರ ಅನುಚ್ಛೇದ 34 ರಲ್ಲಿ ಪ್ರದತ್ತವಾಗಿರುವ ಅಧಿಕಾರದಡಿ ರಾಜ್ಯದ ನಾಲ್ಕೂ ರಸ್ತೆ ಸಾರಿಗೆ ನಿಗಮಗಳ ದರ್ಜೆ-3 ಮೇಲ್ವಿಚಾರಕೇತರ ಹಾಗೂ ದರ್ಜೆ-4 ನೌಕರರಿಗೆ ಪ್ರತಿ ವರ್ಷ, ವರ್ಷಕ್ಕೆ ಒಂದು ಬಾರಿ ಮಾತ್ರ, ಅಂತರ ನಿಗಮ ಖಾಯಂ ವರ್ಗಾವಣೆಗಾಗಿ **"ರಾಜ್ಯ ಸಾರಿಗೆ ನಿಗಮಗಳ ಅಂತರ ನಿಗಮ ವರ್ಗಾವಣೆ ಮಾರ್ಗಸೂಚಿಗಳು-2021"** ಹೊರಡಿಸಿರುತ್ತದೆ. ಸದರಿ ಮಾರ್ಗಸೂಚಿಗಳನ್ವಯ ಅಂತರ ನಿಗಮ ವರ್ಗಾವಣೆಗೆ ಅರ್ಹ ನೌಕರರುಗಳಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾರ್ಗಸೂಚಿಗಳನ್ನು ನೀಡಲಾಗಿದೆ.

ಪ್ರಸ್ತುತ, ಸರ್ಕಾರವು ನೌಕರರ ಅನಾರೋಗ್ಯ ಮತ್ತು ಪರಸ್ಪರ ವರ್ಗಾವಣೆ ಕುರಿತು ಉಲ್ಲೇಖ-4 ರನ್ವಯ ಕೆಲವು ತಿದ್ದುಪಡಿ ಮಾಡಿರುತ್ತದೆ. ಅದರಂತೆ, ಸುತ್ತೋಲೆ ಸಂಖ್ಯೆ: 1690 ದಿನಾಂಕ: 26.03.2021 ರಲ್ಲಿ ಕ್ರಮ ಸಂಖ್ಯೆ I (11) ಮತ್ತು II (1) ನ್ನು ಈ ಕೆಳಗಿನಂತೆ ತಿದ್ದುಪಡಿಗಳನ್ನು ಮಾಡಲಾಗಿದೆ.

**I. ವರ್ಗಾವಣೆ ಮನವಿಯನ್ನು ಸಲ್ಲಿಸಲು ಬಯಸುವ ನೌಕರರು ಗಮನಿಸಬೇಕಾದ ಅಂಶಗಳು:-**

**11.**

ಅ) "ಪತಿ-ಪತ್ನಿ" ಪ್ರಕರಣಗಳಲ್ಲಿ ವರ್ಗಾವಣೆ ಕೋರುವ ನಿಗಮದ ನೌಕರರ ಪತಿ ಅಥವಾ ಪತ್ನಿಯು ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ/ ರಾಜ್ಯ ಸರ್ಕಾರದ ಸ್ವಾಮ್ಯದ ಸಂಸ್ಥೆಯ ಅಧಿಕಾರಿ/ನೌಕರರಾಗಿರತಕ್ಕದ್ದು.

. . 2

ಆ) ಶೇ 40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ನೌಕರರು ಹಾಗೂ ತೀವ್ರತರಹದ ಅನಾರೋಗ್ಯದಡಿ (ಹೆಚ್.ಐ.ವಿ, ಹೃದಯ ರೋಗ, ಕ್ಯಾನ್ಸರ್, ಸ್ಪೈನಲ್ ಕಾರ್ಡ್, ಕಿಡ್ನಿ ವೈಫಲ್ಯ ಹಾಗೂ ಮೆದಳು ಸಂಬಂಧಿಸಿದ ಖಾಯಿಲೆಗಳು) ಅರ್ಜಿ ಸಲ್ಲಿಸುವ ನೌಕರರು ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಮೇಲಿನ ಕ್ರಮ ಸಂಖ್ಯೆ 11 'ಅ' ಮತ್ತು 'ಆ' ಪ್ರಕರಣಗಳಿಗೆ ಅಂತರ ನಿಗಮ ವರ್ಗಾವಣೆಯಲ್ಲಿ ಒಟ್ಟು ಶೇ10 ರಷ್ಟು ಹುದ್ದೆಗಳನ್ನು ಮೀಸಲಿರಿಸಲಾಗಿದೆ. ಸದರಿ ಪ್ರಕರಣಗಳಿಗೆ ಕನಿಷ್ಠ 10 ವರ್ಷಗಳ ಸೇವಾವಧಿ ಷರತ್ತಿಗೆ ವಿನಾಯಿತಿ ನೀಡಲಾಗಿದೆ.

**II. ಪರಸ್ಪರ ಅಂತರ ನಿಗಮ ವರ್ಗಾವಣೆ:–**

1. ಪರಸ್ಪರ ಅಂತರ ನಿಗಮ ವರ್ಗಾವಣೆ ಕೋರುವ ನೌಕರರುಗಳ ಹುದ್ದೆಯು ಒಂದೇ ಆಗಿದ್ದು, ಮತ್ತು ಸದರಿ ನೌಕರರುಗಳ ಮಾಸಿಕ ಮೂಲ ವೇತನ ಹಾಗೂ ತುಟ್ಟಿಭತ್ಯೆ ಆದಷ್ಟು ಮಟ್ಟಿಗೆ ಸಮನಾಗಿರತಕ್ಕದ್ದು, ಅಥವಾ ವ್ಯತ್ಯಾಸವು ಶೇ15ಕ್ಕೆ ಮೀರದಂತೆ ಇದ್ದಲ್ಲಿ ಹಾಗೂ ಸದರಿ ನೌಕರರುಗಳ ಬಾಕಿ ಸೇವಾವಧಿಯು ಆದಷ್ಟು ಮಟ್ಟಿಗೆ ಒಂದೇ ಆಗಿದ್ದಲ್ಲಿ, ಅಂತಹ ನೌಕರರುಗಳನ್ನು ಪರಸ್ಪರ ಅಂತರ ನಿಗಮ ವರ್ಗಾವಣೆಗೆ ಪ್ರತ್ಯೇಕವಾಗಿ ಪರಿಗಣಿಸಲಾಗುವುದು.

ಉಳಿದಂತೆ, ಸುತ್ತೋಲೆ ಸಂಖ್ಯೆ: 1690, ದಿನಾಂಕ: 26.03.2021 ರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಸಂಬಂಧಪಟ್ಟವರೆಲ್ಲರೂ ಮೇಲಿನ ತಿದ್ದುಪಡಿಯನ್ನು ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು. ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಅಕ್ರಂ ಪಾಷ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

ಪ್ರತಿ ಮಾಹಿತಿಗಾಗಿ:

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಕಕರಸಾ ನಿಗಮ ರವರಿಗೆ.
3. ನಿರ್ದೇಶಕರು (ಸಿಬ್ಬಂದಿ:ಜಾಗೃತ), ಕರಾರಸಾ ನಿಗಮ, ರವರಿಗೆ.

ಮುಂದುವರೆದ ಪುಟ ............



ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ/ವಾಕರಸಾ ಸಂಸ್ಥೆ/ಕಕರಸಾ ನಿಗಮ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) / (ನೇಮಕ), ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
9. ಪ್ರಧಾನ ಕಛೇರಿ ಪತ್ರ ಕಡತ.